331
3/9/2016

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ಗದಗ ಜಿಲ್ಲೆಯ ನರಗುಂದದ ಎಸ್.ಎಫ್.ಎಸ್. ಸಮಿತಿಯ ವಿಶ್ವೇಶ್ವರಯ್ಯ ಪಾಲಿಟೆಕ್ನಿಕ್‌ನಲ್ಲಿ 2016-17ನೇ ಸಾಲಿಗೆ ಸಿವಿಲ್ ಇಂಜಿನಿಯರಿಂಗ್ ಮತ್ತು ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಎರಡು ಹೊಸ ಡಿಪ್ಲೋಮಾ ಕೋರ್ಸುಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ-

-----

**ಓ ದ ಲಾ ಗಿ ದೆ:-**

ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಇ 06 ಡಿವಿಪಿ (2) 2016, ದಿ:16-06-2016.

**ಪ್ರ ಸ್ತಾ ವ ನೆ:-**

ಮೇಲೆ ಓದಲಾದ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಗದಗ ಜಿಲ್ಲೆಯ ನರಗುಂದದ ಎಸ್.ಎಫ್.ಎಸ್ ಸಮಿತಿಯ ವತಿಯಿಂದ ನಡೆಸಲ್ಪಡುವ ವಿಶ್ವೇಶ್ವರಯ್ಯ ಪಾಲಿಟೆಕ್ನಿಕ್ (ಖಾಸಗಿ) ನಲ್ಲಿ 2016-17ನೇ ಶೈಕ್ಷಣಿಕ ಸಾಲಿನಿಂದ ತಲಾ 60 ವಿದ್ಯಾರ್ಥಿಗಳ ಪ್ರವೇಶಾತಿಯೊಂದಿಗೆ ಹೊಸದಾಗಿ 1) ಸಿವಿಲ್ ಇಂಜಿನಿಯರಿಂಗ್ ಮತ್ತು 2) ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಎಂಬ 02 ಕೋರ್ಸುಗಳನ್ನು ಪ್ರಾರಂಭಿಸಲು ಎಐಸಿಟಿಇ, ನವದೆಹಲಿ ಇವರು ಅನುಮತಿ ನೀಡಿರುವುದರಿಂದ, ಈ ಕೋರ್ಸುಗಳನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಸಂಸ್ಥೆಯ ಪ್ರಾಂಶುಪಾಲರು ಕೋರಿದ್ದ ಹಿನ್ನೆಲೆಯಲ್ಲಿ, ಸ್ಥಳ ತನಿಖೆ ನಡೆಸಿ ವರದಿ ಸಲ್ಲಿಸಿದ ನಿರ್ದೇಶನಾಲಯದ ತನಿಖಾ ತಂಡವು 2016-17ನೇ ಸಾಲಿನಿಂದ ಹೊಸದಾಗಿ ಈ 02 ಕೋರ್ಸುಗಳನ್ನು ಪ್ರಾರಂಭಿಸಲು ಸಲ್ಲಿಸಿದ ವರದಿಯಂತೆ ಮತ್ತು ಸದರಿ ಪಾಲಿಟೆಕ್ನಿಕ್‌ನಲ್ಲಿ ಈಗಾಗಲೇ ನಡೆಸುತ್ತಿರುವ ಮೆಕ್ಯಾನಿಕಲ್ ಇಂಜಿನಿಯರಿಂಗ್, ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ ಇಂಜಿನಿಯರಿಂಗ್ ಕೋರ್ಸುಗಳಿಗೆ 2016-17ನೇ ಸಾಲಿಗೆ ತಲಾ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯನ್ನು ನಿಗಧಿಪಡಿಸಲು ಸರ್ಕಾರದ ಅನುಮತಿ ನೀಡಬೇಕೆಂದು ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 094 ಟಿಪಿಇ 2016.**

**ಬೆಂಗಳೂರು, ದಿನಾಂಕ:31ನೇ ಆಗಸ್ಟ್ 2016.**

AEM (DVPG)

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗದಗ ಜಿಲ್ಲೆಯ ನರಗುಂದದ ಎಸ್.ಎಫ್.ಎಸ್ ಸಮಿತಿಯ ವತಿಯಿಂದ ನಡೆಸಲ್ಪಡುತ್ತಿರುವ ವಿಶ್ವೇಶ್ವರಯ್ಯ ಪಾಲಿಟೆಕ್ನಿಕ್ (ಖಾಸಗಿ) ನಲ್ಲಿ 2016-17ನೇ ಸಾಲಿನಿಂದ ತಲಾ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ 1) ಸಿವಿಲ್

333
2/9/16

ಇಂಜಿನಿಯರಿಂಗ್ ಮತ್ತು 2) ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಎರಡು ಹೊಸ ಕೋರ್ಸುಗಳನ್ನು ಪ್ರಾರಂಭಿಸಲು ಮತ್ತು ಸದರಿ ಸಂಸ್ಥೆಯಲ್ಲಿ ಈಗಾಗಲೇ ನಡೆಸುತ್ತಿರುವ ಮೆಕ್ಯಾನಿಕಲ್ ಇಂಜಿನಿಯರಿಂಗ್, ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ ಇಂಜಿನಿಯರಿಂಗ್ ಕೋರ್ಸುಗಳಿಗೆ 2016-17ನೇ ಸಾಲಿಗೆ ತಲಾ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯನ್ನು ನಿಗಧಿಪಡಿಸಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S Venkatesh

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

**ಗೆ:**

1. ತಾಂತ್ರಿಕ ಶಿಕ್ಷಣ ನಿರ್ದೇಶಕರು, ಬೆಂಗಳೂರು
2. ಪ್ರಾಂಶುಪಾಲರು, ವಿಶ್ವೇಶ್ವರಯ್ಯ ಪಾಲಿಟೆಕ್ನಿಕ್, ನರಗುಂದ, ಗದಗ ಜಿಲ್ಲೆ-(ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು
4. ಸರ್ಕಾರದ ಉಪ ಕಾರ್ಯದರ್ಶಿ, ತಾಂತ್ರಿಕ ಮತ್ತು ಕಾಲೇಜು ಶಿಕ್ಷಣ ಇಲಾಖೆ
5. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು

...3...

ಹಿಂಬರಹ ಸಂಖ್ಯೆ: ಡಿಟಿಇ 06 ಡಿವಿಪಿ(2) 2016 ದಿನಾಂಕ: 06/09/2016.

ಸರ್ಕಾರದ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಪಟ್ಟ ಈ ಕೆಳಕಂಡ ಅಧಿಕಾರಿಗಳಿಗೆ ಹಾಗೂ ವಿಭಾಗಗಳಿಗೆ ಕಳುಹಿಸಲಾಗಿದೆ.

01. ಪ್ರಿನ್ಸಿಪಾಲರು, ವಿಶ್ವೇಶ್ವರಯ್ಯ ಪಾಲಿಟೆಕ್ನಿಕ್, Hubli-Sholapur National Highway, Naragund-582207 ನರಗುಂದ, ಗದಗ ಜಿಲ್ಲೆ.
02. ಜಂಟಿ ನಿರ್ದೇಶಕರು [ಆಡಳಿತ/ಪರೀಕ್ಷೆ/ತನಿಖೆ/ಎಟಿಎಸ್]
03. ಉಪ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ]
04. ಸಹಾಯಕ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ/ಎಂಪಿಸಿ]
05. ಸಂಖ್ಯಾಧಿಕಾರಿಗಳಿಗೆ
06. ಆಡಳಿತಾಧಿಕಾರಿಗಳಿಗೆ
07. ರಿಜಿಸ್ಟ್ರಾರ್ (ಪರೀಕ್ಷೆ/ಎಸಿಎಂ)
08. ಅಧೀಕ್ಷಕರು, ಎಸಿಎಂ ವಿಭಾಗ
09. ಕಾರ್ಯನಿರ್ವಾಹಕರು, ಎಸಿಎಂ(2) ವಿಭಾಗ
10. ಸರ್ಕಾರಿ ಆದೇಶಗಳ ಕಡತಕ್ಕೆ
11. ಈ ಗೌರ್‌ನೆನ್ಸ್ ಸೆಲ್‌ಗೆ
12. ಸಿಸ್ಟಂ ಅನಾಲಿಸ್ಟ್, ತಾ.ಶಿ.ನಿ.
13. ಪರೀಕ್ಷಾ ವಿಭಾಗದ ಎ.ಎಫ್.ಎಸ್./ಇ.ಎ.ಪಿ./ಆರ್.ಡಿ.ಎಂ.

ಜಂಟಿ ನಿರ್ದೇಶಕರು (ಎಟಿಎಸ್)

6/9/2016.